ಚುಟುಕು ಸುದ್ದಿ

ಮನರೇಗಾ ಪ್ರಗತಿಯ ವಿಡಿಯೋ ಸಂವಾದ

ಉದಯಕಾಲ ನ್ಯೂಸ್

ಮೈಸೂರು: ಮೈಸೂರು ಜಿಲ್ಲಾ ಪಂಚಾಯಿತಿಯ ಮಿನಿ ಸಭಾಂಗಣದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ. ಗಾಯತ್ರಿ ಅವರ ಅಧ್ಯಕ್ಷತೆಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ 3 ತಿಂಗಳ ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ಮೇವಿನ ಸಮಸ್ಯೆ ನಿವಾರಿಸಲು ಕೈಗೊಂಡಿರುವ ಕ್ರಮದ ಕುರಿತು ಹಾಗೂ ಮನರೇಗಾ ಪ್ರಗತಿ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ವಿಡಿಯೋ ಸಂವಾದದ ಮೂಲಕ ಸಭೆ ನಡೆಸಲಾಯಿತು.

ಉಪಕಾರ್ಯದರ್ಶಿ(ಅಭಿವೃದ್ಧಿ), ಕಾರ್ಯಪಾಲಕ ಅಭಿಯಂತರರು, ಸಹಾಯಕ ಯೋಜನ ಅಧಿಕಾರಿಗಳು ಹಾಗೂ ವಿಡಿಯೋ ಸಂವಾದದ ಮೂಲಕ ಎಲ್ಲಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಕಾರ್ಯಪಾಲಕ ಅಭಿಯಂತರರು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

ಶನಿದೇವರ ಜಾತ್ರಾ ಮಹೋತ್ಸವ

ಉದಯಕಾಲ ನ್ಯೂಸ್

ಹಾಸನ: ಕೆ.ಹಿರಿಹಳ್ಳಿ ಗ್ರಾಮದಲ್ಲಿ ಶಿವರಾತ್ರಿ ಪ್ರಯುಕ್ತ ಶ್ರೀ ಶನಿದೇವರ ಜಾತ್ರಾ ಮಹೋತ್ಸವ ಹಾಗೂ ಮೊದಲನೇ ವರ್ಷದ ದನಗಳ ಜಾತ್ರಾ ಮಹೋತ್ಸವ ಹಮ್ಮಿಕೊಳ್ಳಲಾಗಿತ್ತು.

ಮಾ.5ರಂದು ಆದಿಚುಂಚನಗಿರಿ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಅವರು ಆಶೀರ್ವಚನ ನೀಡಿ ಶುಭ ಹಾರೈಸಿದರು. ಸ್ವಾಮೀಜಿ ಅವರಿಗೆ ದೇವಸ್ಥಾನವತಿಯಿಂದ ಗೌರವ ವಂದನೆ ಸಲ್ಲಿಸಲಾಯಿತು.

ದೇವಾಲಯದ ಅರ್ಚಕ ರವಿ ಮಾತನಾಡಿ, ಎತ್ತುಗಳನ್ನು ಸಾಕುವ ರೈತರಿಗೆ ಮೊದಲ ಬಾರಿಗೆ ದನಗಳ ಜಾತ್ರೆ ಹಮ್ಮಿಕೊಂಡಿದ್ದು, ಈಗಾಗಲೇ ಸುತ್ತಮುತ್ತಲ ಹಳ್ಳಿಗಳಿಂದ ದನಗಳನ್ನು ರೈತರು ಜಾತ್ರೆಗೆ ತಂದು ವ್ಯಾಪಾರ ಮಾಡುತ್ತಿದ್ದಾರೆ ಎಂದು ಹೇಳಿದರು.

ಸ್ವಯಂ ಉದ್ಯೋಗಕ್ಕೆ ಪ್ರೋತ್ಸಾಹ ನೀಡಲು ಆಗ್ರಹ

ಉದಯಕಾಲ ನ್ಯೂಸ್

ಪಿರಿಯಾಪಟ್ಟಣ: ಕರ್ನಾಟಕ ಅರಣ್ಯ ಮೂಲ ಬುಡಕಟ್ಟು ಸಮುದಾಯಗಳ ಒಕ್ಕೂಟದಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ತಾಲೂಕು ಆಡಳಿತ ಕಚೇರಿ ಮುಂಭಾಗ ಧರಣಿ ನಡೆಸಿ ಶಿರಸ್ತೇದಾರ್ ಶಕೀಲಾಭಾನು ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಸಂಘಟನೆಯ ರಾಜ್ಯಾಧ್ಯಕ್ಷ ಶೈಲೆಂದ್ರ ಮಾತನಾಡಿ, ತಾಲೂಕಿನಲ್ಲಿ 38 ಹಾಡಿಗಳಿದ್ದು, 8754 ಸಂಖ್ಯೆಯ ಆದಿವಾಸಿ ಜನಸಂಖ್ಯೆ ಇದ್ದಾರೆ. ಇವರಿಗೆ ಅರಣ್ಯ ಹಕ್ಕು ಕಾಯ್ದೆ 2006ರ ನಿಯಮ ತಿದ್ದುಪಡಿ 2012ರ ಪ್ರಕಾರ 21 ಸಮುದಾಯಿಕ ಹಕ್ಕು ಪತ್ರಗಳನ್ನು ಸಮುದಾಯದವರು ಹೋರಾಟ ಮಾಡಿ ಪಡೆದುಕೊಂಡಿದ್ದು, ಇವರುಗಳು ಸ್ವತಂತ್ರ್ಯ ಪೂರ್ವದಿಂದಲೂ ಪಾರಂಪರಿಕವಾಗಿ ಅರಣ್ಯದ ಮೇಲೆ ಅವಲಂಬಿತವಾಗಿ ಜೀವನ ಮಾಡಿಕೊಂಡಿದ್ದಾರೆ. 1972ರ ವನ್ಯಜೀವಿ ಸಂರಕ್ಷಣ ಕಾಯ್ದೆ ಪ್ರಕಾರ ಇವರಿಗೆಳಿಗೆ ಪುನರ್ವಸತಿ ಕಲ್ಪಿಸದೆ ಸ್ಥಳಾಂತರ ಮಾಡಿದ್ದು ಜೀವನೋಪಾಯಕ್ಕೆ ಕೊಡಗು ಮತ್ತು ಕೇರಳಕ್ಕೆ ವಲಸೆ ಹೋಗುವ ಕಾರಣದಿಂದ ಮಕ್ಕಳ ಶಿಕ್ಷಣ ಕುಂಠಿತವಾಗಿದೆ, ಬಾಲ್ಯ ವಿವಾಹ ಅತಿ ಹೆಚ್ಚಾಗಿ ಆಗುತ್ತಿರುವುದಲ್ಲದೆ ದುಶ್ಚಟಗಳಿಗೆ ತುತ್ತಾಗುತ್ತಿದ್ದಾರೆ. ಈ ಸಮಸ್ಯೆಗಳನ್ನು ತಪ್ಪಿಸಲು ಇಲಾಖೆ ತಾಲೂಕು ಆದಿವಾಸಿ ಮಹಿಳಾ ವಿವಿದ್ದೋದ್ದೇಶ ಸಹಕಾರ ಸಂಘ ರಚನೆ ಮಾಡಿ ಸ್ವಯಂ ಉದ್ಯೋಗ ಮಾಡಲು ಹಾಗೂ ಅರಣ್ಯ ಕಿರು ಉತ್ಪನ್ನಗಳ ಸಂಗ್ರಹದಿಂದ ಜೀವನೋಪಾಯ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಪೌಷ್ಟಿಕತೆ ಹೋಗಲಾಡಿಸಲು ಪ್ರತಿ ತಿಂಗಳು ಪೌಷ್ಟಿಕ ಆಹಾರಗಳನ್ನು ಸರ್ಕಾರ ನೀಡಬೇಕು ಎಂದು ಆದೇಶ ಮಾಡಿದ್ದರು, ಐದು ತಿಂಗಳಿನಿಂದ ಪೌಷ್ಟಿಕ ಆಹಾರ ಸಿಗದೆ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಅಧಿಕ್ಷಕಿ ದಮಯಂತಿ, ಮುಖಂಡರಾದ ಜಾನಕಮ್ಮ, ಕೀರ್ತು, ಅನಿಲ್, ಜಯಮ್ಮ, ರೇಣುಕಾ, ಪುಟ್ಟ, ಮಹದೇವ್, ಶುಭಾಷಿಣಿ, ರವಿ, ಪುಟ್ಟಸ್ವಾಮಿ, ಕಮಲಮ್ಮ, ರಾಜಪ್ಪ ಉಪಸ್ಥಿತರಿದ್ದರು.

ನಿವೃತ್ತ ಶಿಕ್ಷಕ ಹೇಮಯ್ಯ ಅವರಿಗೆ ಬೀಳ್ಕೊಡುಗೆ

ಉದಯಕಾಲ ನ್ಯೂಸ್

ಅರಸೀಕೆರೆ: ತಾಲೂಕಿನ ಕಸಬಾ ಹೋಬಳಿಯ ಯಾದಾಪುರ ಶ್ರೀ ಜೇನುಕಲ್ಲು ಸಿದ್ದೇಶ್ವರ ಸ್ವಾಮಿ ಪ್ರೌಢಶಾಲೆಯ ಆಂಗ್ಲ ಭಾಷಾ ನಿವೃತ್ತ ಶಿಕ್ಷಕ ಹೇಮಯ್ಯ ಚಾವಡಿ ಅವರಿಗೆ ಹಳೆ ವಿದ್ಯಾರ್ಥಿ ಸಂಘದವತಿಯಿಂದ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ನಿವೃತ್ತ ಮುಖ್ಯಶಿಕ್ಷಕರಾದ ಚನ್ನಬಸಯ್ಯ, ಮಲ್ಲಯ್ಯ ದೈಹಿಕ ಶಿಕ್ಷಣ ಶಿಕ್ಷಕರಾದ ರಾಜಪ್ಪ, ರೇಣುಕಪ್ಪ, ಹಿಂದಿ ಶಿಕ್ಷಕರಾದ ಕೃಷ್ಣಮೂರ್ತಿ, ಬಸವರಾಜಪ್ಪ, ಶಾಲೆಯ ಸಿಬ್ಬಂದಿ ಶಂಕ್ರಪ್ಪ ಗೋಪಾಲ್, ಶಾಲೆಯ ಅಧ್ಯಕ್ಷ ದೇವಯ್ಯ, ಹಾಗೂ ಹಳೆಯ ವಿದ್ಯಾರ್ಥಿಗಳಾದ ಮಂಜುನಾಥ್ ಸಂಕೋಡನಹಳ್ಳಿ, ಅಂಬರೀಶ್ ಸಂಕೋಡನಹಳ್ಳಿ, ರಾಜು ಮಲ್ಲೇನಹಳ್ಳಿ, ಶಿವಾನಂದ ಮಲ್ಲೇನಹಳ್ಳಿ, ಸಿದ್ದೇಗೌಡ ಜವರನಹಳ್ಳಿ ಉಪಸ್ಥಿತರಿದ್ದರು.

ಸಂಸದ ಪ್ರಜ್ವಲ್ ರೇವಣ್ಣ ಸಾಧನೆ: ಇಂದು ದೇವೇಗೌಡರಿಂದ ಪುಸ್ತಕ ಬಿಡುಗಡೆ

ಉದಯಕಾಲ ನ್ಯೂಸ್

ಹಾಸನ: ಸಂಸದ ಪ್ರಜ್ವಲ್ ರೇವಣ್ಣ ಅವರು ಐದು ವರ್ಷಗಳಲ್ಲಿ ಏನೆಲ್ಲಾ ಸಾಧನೆ ಮಾಡಿದ್ದಾರೆ ಎಂಬುದರ ಬಗ್ಗೆ ಸಾಧನಾ ಕಿರು ಪುಸ್ತಕವನ್ನು ಹೊರತರಲಾಗಿದ್ದು, ಮಾ.6ರಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ಪುಸ್ತಕ ಬಿಡುಗಡೆ ಮಾಡಲಿದ್ದಾರೆ ಎಂದು ಮಾಜಿ ಸಚಿವ ಎಚ್.ಕೆ.ಕುಮಾರಸ್ವಾಮಿ ತಿಳಿಸಿದರು.

ಮಾ.5ರಂದು ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮಾ.6ರಂದು ಸಂಜೆ 4ಗಂಟೆಗೆ ನಗರದ ಜ್ಞಾನಾಕ್ಷಿ ಕಲ್ಯಾಣ ಮಂಟಪದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಸಾಧನಾ ಪುಸ್ತಕ ಅನಾವರಣಗೊಳ್ಳಲಿದೆ ಎಂದರು.

ಉತ್ತಮ ಕೆಲಸ ಮಾಡಿರುವ ಅವರನ್ನೇ ಜಿಲ್ಲೆಯ ಜನರು ಮತ್ತೊಮ್ಮೆ ಆಯ್ಕೆ ಮಾಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಎಚ್.ಕೆ.ಕುಮಾರಸ್ವಾಮಿ ಅವರು, ಲೋಕಸಭೆ ಚುನಾವಣೆಗೆ ಬಿಜೆಪಿ- ಜೆಡಿಎಸ್ ಹೊಂದಾಣಿಕೆ

ತೀರ್ಮಾನ ಆಗಿದೆ. ನಮಗೆ ಎಷ್ಟು ಸೀಟು ಹಂಚಿಕೆ ಎಂಬುದಷ್ಟೇ ಬಾಕಿ ಉಳಿದಿದೆ ಎಂದ ಅವರು, ವಿಧಾನಸಭೆ ಚುನಾವಣೆಯಲ್ಲೂ ಮೈತ್ರಿ ಮುಂದುವರಿಕೆ ಬಗ್ಗೆ ಲೋಕಸಭಾ ಚುನಾವಣೆ ಫಲಿತಾಂಶ ಆಧರಿಸಿ ನಿರ್ಧಾರ ಆಗಲಿದೆ ಎಂದು ಹೇಳಿದರು. ಲೋಕಸಭೆ ಚುನಾವನೆಗೆ ನಾನು, ಮಾಜಿ ಸಚಿವ ಎಚ್.ಡಿ.ರೇವಣ್ಣ ಹಾಗೂ ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಅವರು ಉಸ್ತುವಾರಿ ಆಗಿದ್ದೇವೆ. ಶೀಘ್ರವೇ ಪಕ್ಷದ ವಿವಿಧ ಘಟಕಗಳನ್ನುರಚಿಸಿ ಸಂಘಟನೆ ಮಾಡುವ ಮೂಲಕ ಲೋಕಸಭೆ ಚುನಾವಣೆಗೆ ಅಣಿಗೊಳಿಸಲಾಗುವುದು ಎಂದರು.

ಸಾರ್ವಜನಿಕರಿಗೆ ಹೇಳಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇತ್ತೀಚೆಗೆ 1344 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮಾಡಿರುವುದು ಸ್ವಾಗತಾರ್ಹ. ಆದರೆ, ಯಾವ ಇಲಾಖೆಯ ಕಾಮಗಾರಿ ಇದರಲ್ಲಿ ಸೇರಿವೆ, ಅಂದಾಜು ವೆಚ್ಚ ಎಷ್ಟು, ಯೋಜನೆ ಯಾವುದು ಎಂಬುದನ್ನು ಜಿಲ್ಲಾಡಳಿತ ಸಾರ್ವಜನಿಕರಿಗೆ ಮಾಹಿತಿ ನೀಡಲಿ ಎಂದು ಆಗ್ರಹಿಸಿದರು.

ಆಲೂರಿನಲ್ಲಿ ಮಿನಿ ವಿಧಾನಸೌಧ ಕಾಮಗಾರಿ ಮುಗಿದೇ ಇಲ್ಲ, ಆದರೂ ಉದ್ಘಾಟಿಸಲಾಗಿದೆ. ಸಮಾವೇಶದಲ್ಲಿ 700 ಬಸ್‌ಗಳಲ್ಲಿ ಜನರನ್ನು ಕರೆ ತರಲಾಗಿತ್ತು. ಎಷ್ಟೋ ಕಾಮಗಾರಿ ಅರೆಬರೆಯಾಗಿದ್ದರೂ ಉದ್ಘಾಟನೆ ಮಾಡಿರುವುದರ ಹಿಂದೆ ಲೋಕಸಭೆ ಚುನಾವಣೆ ಉದ್ದೇಶ ಅಡಗಿದೆ ಎಂದು ದೂರಿದರು.

ಸುಮಾರು 19 ಸಚಿವರ ಇಲಾಖೆಗಳ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಎಂಬುದನ್ನು ಹೇಳಲಿ, ಆರ್ಥಿಕ ವರ್ಷ ಮುಗಿಯುತ್ತಿರುವುದರಿಂದ ಖರ್ಚು ಮಾಡಲು ಆಗಲ್ಲ, ಆದರೂ ಚುನಾವಣೆ ಲಾಭಕ್ಕಾಗಿ ಸಮಾವೇಶ ಮಾಡಿದ್ದಾರೆ. ಕುಡಿಯುವ ನೀರಿಗೆ ಹಣ ನೀಡಿದ್ದೇವೆ ಎಂದು ಹೇಳಿದ್ದಾರೆ. ಆದರೆ, ಹಣ ಎಲ್ಲಿದೆ, ಹೊಸ ಕೊಳವೆ ಬಾವಿ ಕೊರೆಯುವ ಹಾಗಿಲ್ಲ, ಯುವನಿಧಿಯಡಿ ನಿರುದ್ಯೋಗ ಭತ್ಯೆಯನ್ನು ಎಲ್ಲರಿಗೂ ನೀಡಬೇಕು ಎಂದು ಆಗ್ರಹಿಸಿದರು.

ಡಿಸಿಎಂ ಹೇಳಿದಂತೆ ಮುಂದಿನ ವರ್ಷ ಎತ್ತಿನಹೊಳೆ ಯೋಜನೆಯಿಂದ ನೀರು ಹರಿಯುವುದಿಲ್ಲ ಎಂದ ಕುಮಾರಸ್ವಾಮಿ, ಅಲ್ಪ ಸಂಖ್ಯಾತರನ್ನು ಓಲೈಕೆ ಮಾಡುವ ಇವರು ಶೇ.4ರಷ್ಟು ಮೀಸಲಾತಿಯನ್ನು ಏಕೆ ಮರು ಜಾರಿ ಮಾಡಿಲ್ಲ ಎಂದು ಪ್ರಶ್ನಿಸಿದರು.

ಜೆಡಿಎಸ್ ಜಿಲ್ಲಾ ವಕ್ತಾರ ಹೊಂಗೆರೆ ರಘು, ತಾಲೂಕು ಅಧ್ಯಕ್ಷ ಎಸ್.ದ್ಯಾವೇಗೌಡ, ನಗರಸಭೆ ಮಾಜಿ ಅಧ್ಯಕ್ಷ ಸೈಯದ್ ಅಕ್ಬರ್ ಉಪಸ್ಥಿತರಿದ್ದರು.

ದೈಹಿಕವಾಗಿ ಸದೃಢವಾಗಲು ಕ್ರೀಡೆ ಮುಖ್ಯ: ಬಿ.ಎಂ.ಸವಿತಾ

ಮಹಿಳಾ ದಿನಾಚರಣೆ ಅಂಗವಾಗಿ ಕ್ರೀಡಾಕೂಟ

ಉದಯಕಾಲ ನ್ಯೂಸ್

ಮೈಸೂರು: ಮಾನಸಿಕವಾಗಿ, ದೈಹಿಕವಾಗಿ ಸದೃಢವಾಗಿರಲು ಕ್ರೀಡೆ ಮುಖ್ಯವಾಗಿದ್ದು, ಪ್ರತಿಯೊಬ್ಬ ಮಹಿಳೆಯು ಯಾವುದಾದರೊಂದು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಬಿ.ಎಂ. ಸವಿತಾ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಮಹಿಳಾ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರು ಮನೆ ಹಾಗೂ ಕಚೇರಿಗಳಲ್ಲಿ ಸಮನಾಗಿ ಕೆಲಸ ಮಾಡುತ್ತಾರೆ. ಒತ್ತಡಗಳನ್ನು ಮರೆಯಲು ಕ್ರೀಡೆ ಅನಿವಾರ್ಯವಾಗಿದ್ದು, ಗಂಡು ಮಕ್ಕಳಂತೆ ಮಹಿಳೆಯರು ಸಾಧನೆ ಮಾಡಬಹುದು. ಕ್ರೀಡೆಯಲ್ಲಿ ಸೋಲು ಗೆಲುವನ್ನು ಸಮನಾಗಿ ಸ್ವೀಕರಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ

ಡಾ.ಕೃಷ್ಣಂರಾಜು ಮಾತನಾಡಿ, ಹೆಣ್ಣು ಮಕ್ಕಳು ಆರೋಗ್ಯವಾಗಿರಬೇಕೆಂದು ಕ್ರೀಡಾಕೂಟವನ್ನು ಆಯೋಜನೆ ಮಾಡಲಾಗಿದ್ದು, ಯುರೋಪ್ ರಾಷ್ಟ್ರಗಳಲ್ಲಿ ಮಹಿಳೆಯರಿಗೆ ಸಮಾನತೆ ಇದೆ. ಆದರೆ ಭಾರತದಲ್ಲಿ ಸಮಾನತೆ ಸಿಕ್ಕಿಲ್ಲದಿದ್ದರೂ ಮಹಿಳೆಯರು ಪುರುಷರಷ್ಟೇ ಬಲಾಢ್ಯರಾಗಿ ಎಲ್ಲಾ ಕ್ಷೇತ್ರಗಳಲ್ಲಿ ತಮ್ಮದೇ ಆದ ಸಾಧನೆ ಮಾಡಿದ್ದಾರೆ. ಕ್ರೀಡೆ ಮನಸ್ಸಿಗೆ ಉಲ್ಲಾಸ ನೀಡುತ್ತದೆ ಎಂದರು.

ಯುವ ಸಬಲೀಕರಣ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ಸ್ವಾಗತಿಸಿದರು. ಹಿರಿಯ ಭೂ ವಿಜ್ಞಾನಿ ಡಾ. ಪುಷ್ಪವತಿ, ಕೆ.ಎನ್. ಎನ್.ಎಸ್.ಎಸ್. ಅಧಿಕಾರಿ ಡಾ.ಲಕ್ಷ್ಮಿ ಪಲೋಡಿ, ಎಂ.ಲಾವಣ್ಯ ವಿಜಯ ಲಕ್ಷ್ಮಿ, ಆರ್. ಸುಂದರೇಶ್ ಉಪಸ್ಥಿತರಿದ್ದರು.

ಎಚ್.ಡಿ.ಕೋಟೆ: ಹೃದಯಾಘಾತದಿಂದ ನಿಧನ ಹೊಂದಿದ ಐಎಎಸ್ ಅಧಿಕಾರಿ ಕೆ.ಶಿವಕುಮಾರ್ ಅವರಿಗೆ ಸರಗೂರು ತಾಲೂಕಿನ ಮುಳ್ಳೂರು ಗ್ರಾಮದಲ್ಲಿ ಶ್ರದ್ಧಾಂಜಲಿ ಸಭೆ ಹಮ್ಮಿಕೊಳ್ಳಲಾಗಿತ್ತು. ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ರವಿಕುಮಾರ್, ಮುಖಂಡರಾದ ಶಿವಚೆನ್ನಪ್ಪ, ಸುಬ್ರಹ್ಮಣ್ಯ, ಮಹದೇವಮೂರ್ತಿ, ಮಂಜುನಾಥ್, ಮಲ್ಲರಾಜ್, ಲೋಕೇಶ್, ಗೋಪಾಲರಾಜ್, ಗೋವಿಂದರಾಜು, ಶಿವಣ್ಣ, ಸುರೇಶ್, ಮಲ್ಲು, ಕುಮಾರ್, ಮಹದೇವಸ್ವಾಮಿ, ಸಿದ್ದರಾಜು, ಶ್ರೀನಿವಾಸ್, ಮಹದೇವಯ್ಯ ಉಪಸ್ಥಿತರಿದ್ದರು.

ಹುಣಸೂರಿನಲ್ಲಿ ಅಂಬೇಡ್ಕರ್ ಪ್ರತಿಮೆ ಸ್ಥಾಪಿಸುವಂತೆ ಸಚಿವರಿಗೆ ಮನವಿ

ಉದಯಕಾಲ ನ್ಯೂಸ್

ಹುಣಸೂರು: ನಗರದ ಪ್ರಮುಖ ಸ್ಥಳದಲ್ಲಿ ಭಾರತ ರತ್ನ ಡಾ। ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆ ಸ್ಥಾಪಿಸುವಂತೆ ಸಮಾಜ ಕಲ್ಯಾಣ ಸಚಿವ ಡಾ। ಎಚ್.ಸಿ.ಮಹದೇವಪ್ಪ ಅವರಿಗೆ ದಲಿತ ಮುಖಂಡರು ಮನವಿ ಸಲ್ಲಿಸಿದರು.

ದ.ಸಂ.ಸ.ದ ನಿಂಗರಾಜ್ ಮಲ್ಲಾಡಿ ಮಾತನಾಡಿ, ಹುಣಸೂರು ನಗರ ಪ್ರಮುಖ ಸ್ಥಳದಲ್ಲಿ ಡಾ। ಬಿ.ಆರ್. ಅಂಬೇಡ್ಕರ್ ಪ್ರತಿಮೆ ಸ್ಥಾಪನೆ ಮಾಡುವಂತೆ ದ.ಸಂ.ಸ 10 ವರ್ಷಗಳಿಂದಲೂ ಮನವಿ ಸಲ್ಲಿಸಿದ್ದರೂ ಇಲ್ಲಿ ಪ್ರತಿಮೆ ಸ್ಥಾಪನೆ ಮಾಡದೇ ಅಧಿಕಾರಿಗಳು ದಲಿತರ ಭಾವನೆ ಧಕ್ಕೆ ತಂದಿದ್ದಾರೆ. ಈ ಕುರಿತು ನಗರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದು, ನಗರಸಭೆಯ ಸಾಮಾನ್ಯ ಸಭೆಯಲ್ಲಿ ಮಂಡಿಸಿ 2-3 ಕಡೆ ಜಾಗ ಗುರುತಿಸುವ ಹಂತದಲ್ಲಿದೆ. ಈ ಪ್ರಕ್ರಿಯೆ ಮುಗಿದ ನಂತರ ಸಮಾಜ ಕಲ್ಯಾಣ ಇಲಾಖೆಯಿಂದ 5

ಕೋಟಿ ಹಣ ಮಂಜೂರು ಮಾಡಿ ಪ್ರತಿಮೆ ಮತ್ತು ಬೃಂದಾವನ ಸ್ಥಾಪನೆ ಮಾಡಬೇಕು ಎಂದು ಹೇಳಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಡಾ।ಎಚ್.ಸಿ. ಮಹದೇವಪ್ಪ ಅವರು, ಈ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಹುಣಸೂರು ನಗರಸಭೆಯವರು ಜಾಗ ನಿಗದಿಗೊಳಿಸಿದ ನಂತರ ಡಾ।ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಸ್ಥಾಪನೆಗೆ ಬೇಕಾಗುವ ಹಣವನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಮಂಜೂರು ಮಾಡಲಾಗುವುದು ಎಂದರು.

ಟಿ.ಎ.ಪಿ.ಸಿ.ಎಂ.ಎಸ್. ಅಧ್ಯಕ್ಷ ಬಸವಲಿಂಗಯ್ಯ, ದ.ಸಂ.ಸ ದ ರತ್ನಪುರಿ ಪುಟ್ಟಸ್ವಾಮಿ, ಬಲ್ಲೇನಹಳ್ಳಿ ಕೆಂಪರಾಜು, ದಲಿತ ಮುಖಂಡ ಬನ್ನಿಕುಪ್ಪೆ ಚಿಕ್ಕಸ್ವಾಮಿ, ಹೈರಿಗೆ ಗೋವಿಂದರಾಜು, ಬಿಳಿಕೆರೆ ಸ್ವಾಮಿ, ಅಭಿ ಮೂಕನಹಳ್ಳಿ ಉಪಸ್ಥಿತರಿದ್ದರು.

ಹಾಸನ: ರಾಮದೇವರಪುರ ಮತ್ತು ನಿಟ್ಟೂರು ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಕಾಮಗಾರಿಗೆ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಶಾಸಕ ಎಚ್.ಪಿ.ಸ್ವರೂಪ್ ಪ್ರಕಾಶ್ ಭೂಮಿ ಪೂಜೆ ಮಾಡಿದರು.

ಮಾ.8ರಿಂದ ಶ್ರೀ ಮಲೈ ಮಹದೇಶ್ವರ ಸ್ವಾಮಿ ಜಾತ್ರೋತ್ಸವ

ಉದಯಕಾಲ ನ್ಯೂಸ್

ಹುಣಸೂರು: ಶ್ರೀ ಮಲೈ ಮಹದೇಶ್ವರ ಸ್ವಾಮಿ ಹಾಗೂ ದನಗಳ ಜಾತ್ರಾ ಮಹೋತ್ಸವ ಮಾ.8ರಿಂದ 11ರ ವರೆಗೆ ನಡೆಯಲಿದೆ ಎಂದು ದೇವಸ್ಥಾನದ ಅಭಿವೃದ್ಧಿ ಸಮಿತಿ ಅಧ್ಯಕ್ಷ ದೇವರಾಜ್ ಮೂರ್ತಿ ಎಚ್.ಪಿ. ತಿಳಿಸಿದರು.

ನಗರದ ಪತ್ರಕರ್ತರ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಮಲೈ ಮಹದೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವ ಹಾಗೂ ಕೆಂಡೋತ್ಸವ 4ದಿನ ನಡೆಯಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ವಿವರ: ಮಾ.8ರಂದು ಬೆಳಗ್ಗೆ ಹಾಲರವಿ ಸೇವೆ, ಬಿಲ್ವಾರ್ಚನೆ ಮತ್ತು ಪೂಜಾ ಕಾರ್ಯಕ್ರಮ, ರಾತ್ರಿ 10.30ಕ್ಕೆ ಶ್ರೀ ಮಲೈ ಮಹದೇಶ್ವರ ಸ್ವಾಮಿ ನೀಲಗಾರರದ ಸಾಲೂರು ಮಠದ ದೇವರ ಗುಡ್ಡಪ್ಪ ಭಜನೆ, ಮಾ.9ರಂದು ಬೆಳಗ್ಗೆ 5ಗಂಟೆಗೆ